# **ಕರ್ನಾಟಕ ಸರ್ಕಾರದ ನಡಾವಳಿಗಳು**

**ವಿಷಯ :** ಕೆಪಿಸಿ ಗ್ಯಾಸ್ ಪವರ್ ಕಾರ್ಪೊರೇಷನ್ ಲಿಮಿಟೆಡ್(ಕೆಪಿಸಿ ಜಿಪಿಸಿಎಲ್) ರನ್ನು ಕರ್ನಾಟಕ ಪವರ್ ಕಾರ್ಪೊರೇಷನ್ ಲಿಮಿಟೆಡ್ (ಕೆಪಿಸಿಎಲ್) ನೊಂದಿಗೆ ವಿಲೀನಗೊಳಿಸುವ ಕುರಿತು.

**ಓದಲಾಗಿದೆ**:
1. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ನಿಗಮ ನಿಯಮಿತ ಇವರ ಪತ್ರ ಸಂಖ್ಯೆ: A1R7A, ದಿನಾಂಕ:.03.2026.
2. ಸಚಿವ ಸಂಪುಟ ಸಭೆಯ ನಿರ್ಣಯ ಪ್ರಕರಣ ಸಂಖ್ಯೆ: ಸಿ.443/2026, ದಿನಾಂಕ: 21.08.2026.

**ಪ್ರಸ್ತಾವನೆ:-**

ಕರ್ನಾಟಕ ರಾಜ್ಯದಲ್ಲಿ ವಿದ್ಯುತ್ ಉತ್ಪಾದನೆಯ ವ್ಯಾಪ್ತಿಯನ್ನು ವಿಸ್ತರಿಸುವ ಹಾಗೂ ಅನಿಲ ಆಧಾರಿತ ವಿದ್ಯುತ್ ಉತ್ಪಾದನಾ ಯೋಜನೆಗಳನ್ನು ಅಭಿವೃದ್ಧಿಪಡಿಸುವ ಉದ್ದೇಶದಿಂದ 'ಕೆಪಿಸಿ ಗ್ಯಾಸ್ ಪವರ್ ಕಾರ್ಪೊರೇಷನ್ ಲಿಮಿಟೆಡ್' (ಹಿಂದೆ 'ಕೆಪಿಸಿ ಬಿಡದಿ ಪವರ್ ಕಾರ್ಪೊರೇಷನ್ ಲಿಮಿಟೆಡ್') ರನ್ನು ಏಪ್ರಿಲ್ 19, 1996 ರಂದು ಕರ್ನಾಟಕ ಪವರ್ ಕಾರ್ಪೊರೇಷನ್ ಲಿಮಿಟೆಡ್ (ಕೆಪಿಸಿಎಲ್) ನ ಅಂಗ ಸಂಸ್ಥೆಯಾಗಿ ಸ್ಥಾಪಿಸಲಾಗಿರುತ್ತದೆ. "ಕೆಪಿಸಿ ಗ್ಯಾಸ್ ಪವರ್ ಕಾರ್ಪೊರೇಷನ್ ಲಿಮಿಟೆಡ್" ಕಂಪನಿಯು (ಕೆಪಿಸಿ ಜಿಪಿಸಿಎಲ್) ಪ್ರಮುಖ ವಿದ್ಯುತ್ ಘಟಕಗಳಾದ ಯಲಹಂಕ ಕಂಬೈನ್ಡ್ ಸೈಕಲ್ ಪವರ್ ಪ್ಲಾಂಟ್ (YCCPP - 370 MW) ಮತ್ತು ಬಿಡದಿ ತ್ಯಾಜ್ಯದಿಂದ-ಶಕ್ತಿ ಉತ್ಪಾದನಾ ಸ್ಥಾವರ (BWTE - 11.5 MW) ಯೋಜನೆಗಳನ್ನು ನಿರ್ವಹಿಸುತ್ತಿದೆ.

ಯಲಹಂಕ ಕಂಬೈನ್ಡ್ ಸೈಕಲ್ ಪವರ್ ಪ್ಲಾಂಟ್ (ವೈಸಿಸಿಪಿಪಿ) ಮತ್ತು ಬಿಡದಿ ವೇಸ್ಟ್-ಎನರ್ಜಿ ಪ್ಲಾಂಟ್‌ಗಳು (BWTE) 2024-25ಕ್ಕೆ ವಾಣಿಜ್ಯ ಕಾರ್ಯಚರಣೆಯನ್ನು ಪ್ರಾರಂಭಿಸಿರುತ್ತದೆ. KPCL ಮಂಡಳಿಯು KPCL ನ ಮುಂಗಡಗಳ ಸೂಕ್ತ ಭಾಗವನ್ನು ಈಕ್ವಿಟಿಯಾಗಿ ಪರಿವರ್ತಿಸುವ ಪ್ರಸ್ತಾವನೆಯನ್ನು ದಿನಾಂಕ: 18.09.2025 303ನೇ ಆಡಳಿತ ಮಂಡಳಿ ಸಭೆಯಲ್ಲಿ ಮಂಡಿಸಲಾಗಿದೆ. ವಿವರವಾದ ಚರ್ಚೆಯ ನಂತರ ಕೆಪಿಸಿ ಗ್ಯಾಸ್ ಪವರ್ ಕಾರ್ಪೊರೇಷನ್ ಲಿಮಿಟೆಡ್ ಸಂಸ್ಥೆಯನ್ನು(100% ಅಂಗ ಸಂಸ್ಥೆಯಾಗಿರುತ್ತದೆ) ಕರ್ನಾಟಕ ಪವರ್ ಕಾರ್ಪೊರೇಷನ್ ಲಿಮಿಟೆಡ್ ನೊಂದಿಗೆ ವಿಲೀನಗೊಳಿಸಲು ಅಭಿಪ್ರಾಯಿಸಿ ವಿವರವಾದ ಪ್ರಸ್ತಾವನೆಯನ್ನು ಆಡಳಿತ ಮಂಡಳಿ ಸಭೆಯಲ್ಲಿ ಮಂಡಿಸಲು ತಿರ್ಮಾನಿಸಲಾಗಿದ್ದು, ಕೆಪಿಸಿ ಗ್ಯಾಸ್ ಪವರ್ ಕಾರ್ಪೊರೇಷನ್ ಲಿಮಿಟೆಡ್ ಸಂಸ್ಥೆಯನ್ನು ಕರ್ನಾಟಕ ಪವರ್ ಕಾರ್ಪೊರೇಷನ್ ಲಿಮಿಟೆಡ್ ನೊಂದಿಗೆ ವಿಲೀನಗೊಳಿಸುವ ಕಾರ್ಯಸಾಧ್ಯತಾ ವರದಿಯನ್ನು ನೀಡಲು M/s Ramraj & Co. Chartered Accountant ಇವರನ್ನು ನೇಮಕ ಮಾಡಲಾಗಿ, M/s Ramraj & Co. Chartered Accountant ರವರು ನೀಡಿರುವ ಕಾರ್ಯಸಾಧ್ಯತಾ ವರದಿಯ ಪ್ರಕಾರ ಕೆಪಿಸಿ ಗ್ಯಾಸ್ ಪವರ್ ಕಾರ್ಪೊರೇಷನ್ ಲಿಮಿಟೆಡ್ ಕಂಪನಿಯು ಕರ್ನಾಟಕ ಪವರ್ ಕಾರ್ಪೊರೇಷನ್ ಲಿಮಿಟೆಡ್ ಸಂಸ್ಥೆಯ ಸಂಪೂರ್ಣ ಸ್ವಾಮ್ಯದ ಅಂಗಸಂಸ್ಥೆಯಾಗಿದ್ದು ರೂ.2,109.10 ಕೋಟಿಗಳಷ್ಟು ಹೂಡಿಕೆಯನ್ನು ಕೆಪಿಸಿಎಲ್ ನಿಂದ ಒದಗಿಸಲಾಗಿರುತ್ತದೆ. ಯಾವುದೇ ಪ್ರತ್ಯೇಕ ಅಂಗಸಂಸ್ಥೆಯಾಗಲಿ ಅಥವಾ ವಿಲೀನಾತಿಯಾಗಲಿ ಯಾವುದಾದರೂ ನಷ್ಟ, ನಿರ್ದಿಷ್ಟ ವೆಚ್ಚ, ವಸೂಲಾತಿಗಳು, ಸುಂಕ ನಿರಾಕರಣೆಗಳು ಅಂತಿಮವಾಗಿ ಕರ್ನಾಟಕ ವಿದ್ಯುತ್ ನಿಗಮ ನಿಯಮಿತದ (KPCL) ಮೇಲೆ ಪರಿಣಾಮ ಬೀರುವುದರಿಂದ ಆರ್ಥಿಕ ದೃಷ್ಟಿಕೋನದಿಂದಲು ಕರ್ನಾಟಕ ಪವರ್ ಕಾರ್ಪೊರೇಷನ್ ಲಿಮಿಟೆಡ್ ನ ನಿವ್ವಳ ಮೌಲ್ಯ ಮತ್ತು

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment **WPP No. 297**



ಹಣಕಾಸಿನ ಹರಿವಿನ ಮೇಲೆ ಯಾವುದೇ ಹೆಚ್ಚುವರಿ ಹೊರೆಯಾಗದಿರುವ ಬಗ್ಗೆ ತಿಳಿಸಿ, ಎರಡೂ ಕಂಪನಿಗಳ ಆಡಳಿತ ಮಂಡಳಿಗಳು ವಿಲೀನಾತಿ ಪ್ರಸ್ತಾವನೆಯನ್ನು ಪರಿಗಣಿಸಬಹುದಾಗಿರುವ ಬಗ್ಗೆ ಅಭಿಪ್ರಾಯ ನೀಡಿರುತ್ತಾರೆ.

M/s Ramraj & Co. Chartered Accountant ರವರು ನೀಡಿರುವ ಕಾರ್ಯಸಾಧ್ಯತಾ ವರದಿಯನ್ನು ದಿನಾಂಕ: 08.01.2026ರಂದು ನಡೆದ ಕರ್ನಾಟಕ ಪವರ್ ಕಾರ್ಪೊರೇಷನ್ ಲಿಮಿಟೆಡ್ ನ 305ನೇ ಆಡಳಿತ ಮಂಡಳಿಯ ಸಭೆಯಲ್ಲಿ ಹಾಗೂ ದಿನಾಂಕ: 09.02.2026ರಂದು ನಡೆದ ಕೆಪಿಸಿ ಗ್ಯಾಸ್ ಪವರ್ ಕಾರ್ಪೊರೇಷನ್ ಲಿಮಿಟೆಡ್ ನ 129ನೇ ಆಡಳಿತ ಮಂಡಳಿ ಸಭೆಯಲ್ಲಿ ಮಂಡಿಸಿ ವಿವರವಾಗಿ ಚರ್ಚಿಸಿದ ನಂತರ ವಿಲೀನಗೊಳಿಸುವ ಪ್ರಸ್ತಾವನೆಯನ್ನು ಅನುಮೋದಿಸಲಾಗಿರುತ್ತದೆ.

ಸರ್ಕಾರವು ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಮೇಲೆ ಓದಲಾದ ಕ್ರಮ ಸಂಖ್ಯೆ (2) ರಂತೆ ದಿನಾಂಕ:21.08.2026 ರಂದು ಸಚಿವ ಸಂಪುಟ ಸಭೆಯಲ್ಲಿ ಮಂಡಿಸಲಾಗಿ ಅನುಮೋದನೆ ನೀಡಲಾಗಿದ್ದು, ಸದರಿ ಸಚಿವ ಸಂಪುಟದ ನಿರ್ಣಯದ ಹಿನ್ನೆಲೆಯಲ್ಲಿ ಈ ಕೆಳಕಂಡ ಆದೇಶ.

**ಸರ್ಕಾರಿ ಆದೇಶ ಸಂಖ್ಯೆ:ಎನರ್ಜಿ 60 ಪಿಪಿಸಿ 2026**
**ಬೆಂಗಳೂರು, ದಿನಾಂಕ:24.09.2026**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ದಿನಾಂಕ 01.04.2027 ರಿಂದ ಜಾರಿಗೆ ಬರುವಂತೆ 'ಕೆಪಿಸಿ ಗ್ಯಾಸ್ ಪವರ್ ಕಾರ್ಪೊರೇಷನ್ ಲಿಮಿಟೆಡ್' (KPC GPCL) ರನ್ನು 'ಕರ್ನಾಟಕ ಪವರ್ ಕಾರ್ಪೊರೇಷನ್ ಲಿಮಿಟೆಡ್' (KPCL) ನೊಂದಿಗೆ ವಿಲೀನಗೊಳಿಸಲು (Merge) ಅನುಮೋದನೆ ನೀಡಿದೆ.

ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಪವರ್ ಕಾರ್ಪೊರೇಷನ್ ಲಿಮಿಟೆಡ್ ರವರು ವಿಲೀನ ಪ್ರಕ್ರಿಯೆ ಪೂರ್ಣಗೊಂಡ ನಂತರ ಅನುಸರಣಾ ವರದಿ (Compliance Report) ಹಾಗೂ ಶಾಸನಬದ್ಧ ನಿಯಮಗಳ ಪಾಲನಾ ವಿವರಗಳನ್ನು ಸರ್ಕಾರಕ್ಕೆ ಕಡ್ಡಾಯವಾಗಿ ನೀಡುವುದು.

ಈ ಆದೇಶವನ್ನು ಸಚಿವ ಸಂಪುಟವು ವಿಷಯ ಸಂಖ್ಯೆ: ಸಿ.443/2026, ದಿನಾಂಕ: 21.08.2026ರಲ್ಲಿ ನೀಡಿರುವ ಅನುಮೋದನೆಯೊಂದಿಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಶಾಂತಾರಾಮ)
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.

**PR-391**

ಮುದ್ರಕರು ಹಾಗೂ ಪ್ರಕಾಶಕರು:- ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

P S BASAVARAJU Digitally signed by P S BASAVARAJU Date: 2026.09.30 17:29:12 +05'30'